ಪಶು ಚಿಕಿತ್ಸಾಲಯಗಳ ಕೊರತೆ

1294(1398); ಶ್ರೀ: ಕ್ಯಾತಸಂದ್ರ ಎನ್ ರಾಜಣ್ಣ (ಮಧುಗಿರಿ)

ಅ) ಮಧುಗಿರಿ ವಿಧಾನಸಭಾ ಕ್ಷೇತ್ರದಲ್ಲಿ ಪಶುಚಿಕಿತ್ಸಾಲಯಗಳ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪಶುಚಿಕಿತ್ಸಾಲಯಗಳ ಸ್ಥಾಪನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರಣೆ ನೀಡುವುದು)?

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಪಶು ಸಂಗೋಪನಾ ಸಚಿವರು)

ಅ) 2007 ರ ಜಾನುವಾರು ಗಣತಿಯಂತೆ ಮಧುಗಿರಿ ವಿಧಾನಸಭಾ ಕ್ಷೇತ್ರದಲ್ಲಿ 71,051 ಜಾನುವಾರು ಘಟಕಗಳಿದ್ದು, ರಾಷ್ಟ್ರೀಯ ಕೃಷಿ ಆಯೋಗದ ಶಿಫಾರಸ್ಸಿನಂತೆ ಪ್ರತಿ 5,000 ಜಾನುವಾರು ಘಟಕಗಳಿಗೆ ಒಂದು ಪಶುವೈದ್ಯ ಸಂಸ್ಥೆ ಕಾರ್ಯನಿರ್ವಹಿಸಬೇಕಾಗಿದ್ದು, ಅದರಂತೆ 14 ಪಶುವೈದ್ಯ ಸಂಸ್ಥೆಗಳ ಅವಶ್ಯಕತೆ ಇದ್ದು, ಹಾಲಿ 18 ಪಶುವೈದ್ಯ ಸಂಸ್ಥೆಗಳು ಅಂದರೆ, 1 ಪಶು ಆಸ್ಪತ್ರೆ, 11 ಪಶುಚಿಕಿತ್ಸಾಲಯ, 5 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ, 1 ಕೃತಕ ಗರ್ಭಧಾರಣಾ ಕೇಂದ್ರ ಕಾರ್ಯನಿರ್ವಹಿಸುತ್ತಿದೆ. ಹೀಗಾಗಿ, ಮಧುಗಿರಿ ವಿಧಾನಸಭಾ ಕ್ಷೇತ್ರದಲ್ಲಿ ಪಶುಚಿಕಿತ್ಸಾಲಯಗಳ ಕೊರತೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ